All India Radio: Bangalore
National Bulletin In Kannada
26.05.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

- ಗುಜರಾತ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ: ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
- ರೈಸಿಂಗ್ ಈಶಾನ್ಯ ಹೂಡಿಕೆದಾರರ ಶೃಂಗಸಭೆ: ೪ ಲಕ್ಷ ಕೋಟಿ ರೂಪಾಯಿಗಳ ಹೂಡಿಕೆ
- ರಾಷ್ಟ್ರವ್ಯಾಪಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಇದೇ ೨೯ ರಂದು ಒಡಿಶಾದ ಪುರಿಯಿಂದ ಪ್ರಾರಂಭ
- ಐಪಿಎಲ್ ಟಿ-೨೦ ಕ್ರಿಕೆಟ್: ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ ತಂಡಕ್ಕೆ ೧೧೦ ರನ್‌ಗಳ ಬೃಹತ್ ಗೆಲುವು

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಮತ್ತು ನಾಳೆ ತಮ್ಮ ತವರು ರಾಜ್ಯ ಗುಜರಾತ್‌ಗೆ ಭೇಟಿ ನೀಡಲಿದ್ದು, ಬೃಹತ್ ರೋಡ್ ಶೋನಲ್ಲಿ ಪಾಲ್ಗೊಳ್ಳಲಿದ್ದಾರೆ. ಆಪರೇಷನ್ ಸಿಂದೂರ ನಂತರ ಇದೇ ಮೊದಲ ಬಾರಿಗೆ ಪ್ರಧಾನಿ ಅವರು ಗುಜರಾತ್‌ಗೆ ನೀಡುತ್ತಿದ್ದಾರೆ. ಇದೇ ವೇಳೆ ಪ್ರಧಾನಿ ಅವರು ಇಂದು ದಾಹೋದ್‌ನಲ್ಲಿ ಸುಮಾರು ೨೪ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದ್ದಾರೆ. ಎರಡು ದಿನಗಳ ಗುಜರಾತ್ ಭೇಟಿಯ ಸಂದರ್ಭದಲ್ಲಿ ಅವರು, ದಾಹೋದ್ ಲೋಕೋಮೋಟಿವ್ ಉತ್ಪಾದನಾ ಘಟಕವನ್ನು ರಾಷ್ಟ್ರಕ್ಕೆ ಅರ್ಪಿಸಲಿದ್ದಾರೆ. ಈ ಘಟಕವು ಮುಂದಿನ ೧೧ ವರ್ಷಗಳಲ್ಲಿ ಒಂದು ಸಾವಿರ ೨೦೦ ವಿದ್ಯುತ್ ಸರಕು ಲೋಕೋಮೋಟಿವ್‌ಗಳನ್ನು ಉತ್ಪಾದಿಸಲಿದೆ. ನಂತರ, ಪ್ರಧಾನಿ ಅವರು ಭುಜ್‌ನಲ್ಲಿ ೫೩ ಸಾವಿರ ೪೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದ್ದಾರೆ.

<><><><>

ಕಾಂಗ್ರೆಸ್ ಸಂಸದ ಡಾ. ಶಶಿ ತರೂರ್ ನೇತೃತ್ವದ ಸರ್ವಪಕ್ಷ ನಿಯೋಗ ಗಯಾನಾ ತಲುಪಿದೆ. ಚೆಡ್ಡಿ ಜಗನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅವರು ಆಗಮಿಸಿದಾಗ, ನಿಯೋಗಕ್ಕೆ ಆತ್ಮೀಯ ಸ್ವಾಗತ ನೀಡಲಾಯಿತು. ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆಯ ಭಾರತದ ಸಂದೇಶವನ್ನು ತಿಳಿಸಲು ನಿಯೋಗವು ಗಯಾನಾಗೆ ಭೇಟಿ ನೀಡಿದೆ. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತ ದೃಢನಿಶ್ಚಯ ಹೊಂದಿದೆ ಮತ್ತು ಒಗ್ಗಟ್ಟಿನಿಂದ ನಿಂತಿದೆ ಎಂದು ಗಯಾನಾದಲ್ಲಿರುವ ಭಾರತದ ಹೈಕಮಿಷನ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ಇದಲ್ಲದೆ, ಎನ್‌ಸಿಪಿ ಸಂಸದೆ ಸುಪ್ರಿಯಾ ಸುಳೆ ನೇತೃತ್ವದ ಮತ್ತೊಂದು ಸರ್ವಪಕ್ಷ ನಿಯೋಗವು ಕತಾರ್‌ನ ಪ್ರಮುಖ ಪತ್ರಿಕೆಗಳಾದ ಅಲ್ ಶಾರ್ಕ್ ಮತ್ತು ಪೆನಿನ್ಸುಲಾಗಳ ಸಂಪಾದಕೀಯ ತಂಡದೊಂದಿಗೆ ಸಂವಾದ ನಡೆಸಿದೆ. ಸಂವಾದದ ಸಮಯದಲ್ಲಿ ನಿಯೋಗವು ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರದ ಬೆಳವಣಿಗೆಗಳ ಕುರಿತು ಭಾರತದ ದೃಷ್ಟಿಕೋನಗಳನ್ನು ತಿಳಿಸಿತು. ಬಳಿಕ ನಿಯೋಗವು ಮಧ್ಯಪ್ರಾಚ್ಯ ಜಾಗತಿಕ ವ್ಯವಹಾರಗಳ ಮಂಡಳಿಗೆ ಭೇಟಿ ನೀಡಿತು ಮತ್ತು ಭಯೋತ್ಪಾದನೆಯ ಬಗ್ಗೆ ಭಾರತದ ಶೂನ್ಯ ಸಹಿಷ್ಣುತೆ ನೀತಿಯ ಕುರಿತು ಚರ್ಚೆ ನಡೆಸಿತು.

<><><><>

ನವದೆಹಲಿಯಲ್ಲಿ ನಡೆದ ರೈಸಿಂಗ್ ಈಶಾನ್ಯ ಹೂಡಿಕೆದಾರರ ಶೃಂಗಸಭೆ, ೪ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಹೂಡಿಕೆಯನ್ನು ಆಕರ್ಷಿಸಿದೆ. ನಿನ್ನೆ ಮುಕ್ತಾಯಗೊಂಡ ಎರಡು ದಿನಗಳ ಶೃಂಗಸಭೆಯಲ್ಲಿ ಜಪಾನ್, ಯುರೋಪ್ ಸೇರಿದಂತೆ ೮೦ ಕ್ಕೂ ಹೆಚ್ಚು ದೇಶಗಳ ನಿಯೋಗಗಳು ಭಾಗವಹಿಸಿದ್ದವು. ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಈಶಾನ್ಯ ಪ್ರದೇಶಾಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, ಈಶಾನ್ಯ ಭಾರತವು ಜಾಗತಿಕ ಪಾಲುದಾರಿಕೆ ಮತ್ತು ಪರಸ್ಪರ ಆಸಕ್ತಿಯ ಕೇಂದ್ರವಾಗಿ ಹೊರಹೊಮ್ಮಿದೆ. ಈಶಾನ್ಯ ಪ್ರದೇಶವು ಭಾರತದ ಮುಂದಿನ ಆರ್ಥಿಕ ಶಕ್ತಿ ಕೇಂದ್ರವಾಗಲಿದೆ ಎಂದು ಹೇಳಿದರು. ಈಶಾನ್ಯ ಪ್ರದೇಶದಲ್ಲಿನ ಅವಕಾಶಗಳನ್ನು ಅನ್ವೇಷಿಸಲು ದೇಶದ ಉನ್ನತ ಕೈಗಾರಿಕಾ ಉದ್ಯಮಿಗಳು, ೧ ಲಕ್ಷ ೫೫ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಹೂಡಿಕೆಗಳನ್ನು ಘೋಷಿಸುವ ಮೂಲಕ ಈ ಪ್ರಮಾಣದಲ್ಲಿ ಹೂಡಿಕೆ ಶೃಂಗಸಭೆಯನ್ನು ಆಯೋಜಿಸಿರುವುದು ಇದೇ ಮೊದಲು ಎಂದು ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ತಿಳಿಸಿದರು.

<><><><>

ಜಪಾನ್ ಅನ್ನು ಹಿಂದಿಕ್ಕಿ ಭಾರತವು ವಿಶ್ವದ ೪ನೇ ಅತಿದೊಡ್ಡ ಆರ್ಥಿಕತೆಯಾಗಿದೆ ಎಂದು ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ.ಆರ್. ಸುಬ್ರಮಣ್ಯಂ ತಿಳಿಸಿದ್ದಾರೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾಹಿತಿ ನೀಡಿದ ಅವರು, ಅಂತಾರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ದತ್ತಾಂಶದ ಪ್ರಕಾರ, ಭಾರತವು ಇಂದು ಜಪಾನ್ ದೇಶಕ್ಕಿಂತ ದೊಡ್ಡ ಆರ್ಥಿಕತೆಯಾಗಿ ಬೆಳೆದಿದೆ. ನಾಲ್ಕು ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಿರುವ ಭಾರತ, ವಿಶ್ವದ ೪ನೇ ಅತಿದೊಡ್ಡ ಆರ್ಥಿಕತೆಯಾಗಿದೆ ಎಂದು ಹೇಳಿದ್ದಾರೆ. ಮುಂದಿನ ೨-೩ ವರ್ಷಗಳಲ್ಲಿ ಭಾರತ, ವಿಶ್ವದ ೩ನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಬಿ.ವಿ.ಆರ್. ಸುಬ್ರಮಣ್ಯಂ ವಿಶ್ವಾಸ ವ್ಯಕ್ತಪಡಿಸಿದರು.

ಧ್ವನಿ: ಬಿ.ವಿ.ಆರ್. ಸುಬ್ರಮಣ್ಯಂ (೧೬ ಸೆಕೆಂಡ್‌ಗಳು)

<><><><>

ರಾಷ್ಟ್ರವ್ಯಾಪಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ವನ್ನು ಇದೇ ೨೯ ರಂದು ಒಡಿಶಾದ ಪುರಿಯಿಂದ ಪ್ರಾರಂಭಿಸಲಾಗುವುದು ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಈ ಅಭಿಯಾನವು ೭೦೦ ಸ್ಥಳಗಳಲ್ಲಿ ನಡೆಯಲಿದ್ದು, ವಿಜ್ಞಾನಿಗಳ ತಂಡವು ರೈತರೊಂದಿಗೆ ನೇರ ಸಂವಾದದಲ್ಲಿ ತೊಡಗಿಸಿಕೊಳ್ಳುವ ಮೂಲಕ ಹಳ್ಳಿ-ಹಳ್ಳಿಗೆ ಪ್ರಯಾಣಿಸಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.  ಈ ಅಭಿಯಾನದಲ್ಲಿ ೭೩೧ ಕೃಷಿ ವಿಜ್ಞಾನ ಕೇಂದ್ರಗಳು, ೧೧೩ ಭಾರತೀಯ ಕೃಷಿ ಸಂಶೋಧನಾ ಮಂಡಳಿ ಸಂಸ್ಥೆಗಳು, ರಾಜ್ಯ ಮಟ್ಟದ ಇಲಾಖೆಗಳು ಮತ್ತು ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಮೀನುಗಾರಿಕೆ ಮತ್ತು ರೈತ ಕಲ್ಯಾಣ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

<><><><>

ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡು, ಕೇರಳ, ಮಾಹೆ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಕೊಂಕಣ, ಗೋವಾ ಮತ್ತು ಮಹಾರಾಷ್ಟ್ರಗಳಲ್ಲಿಯೂ ಇಂದು ಮಳೆಯಾಗುವ ಸಾಧ್ಯತೆ ಇದೆ. ಮುಂದಿನ ಎರಡು ದಿನಗಳಲ್ಲಿ ದೆಹಲಿ, ಆಂಧ್ರಪ್ರದೇಶ, ಗುಜರಾತ್, ಹರಿಯಾಣ, ಚಂಡೀಗಢ, ಹಿಮಾಚಲ ಪ್ರದೇಶ, ಜಾರ್ಖಂಡ್, ಪಂಜಾಬ್ ಮತ್ತು ರಾಜಸ್ಥಾನದಲ್ಲಿ ಗುಡುಗು ಸಹಿತ ಮಳೆ, ಮಿಂಚು ಮತ್ತು ಬಿರುಗಾಳಿ ಬೀಸುವ ಸಾಧ್ಯತೆ ಇದೆ. ಅರುಣಾಚಲ ಪ್ರದೇಶದ ಕೆಲವು ಭಾಗಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದ್ದರೆ, ರಾಜಸ್ಥಾನದಲ್ಲಿ ಉಷ್ಣ ಅಲೆಗಳು ಮತ್ತು ಧೂಳಿನ ಬಿರುಗಾಳಿ ಬೀಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕದಲ್ಲಿ ಮಳೆ ಪರಿಸ್ಥಿತಿ ಕುರಿತು ನಮ್ಮ ಬಾತ್ಮೀದಾರರಿಂದ ಹೆಚ್ಚಿನ ಮಾಹಿತಿ

ಧ್ವನಿ : ಸುಧೀಂದ್ರ (೩೪ ಸೆಕೆಂಡ್‌ಗಳು)

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಪಂದ್ಯಾವಳಿಯ ದಿನದ ಮೊದಲ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೮೩ ರನ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೩೦ ರನ್ ಮಾಡಿತು. ಚೆನ್ನೈ ಪರ ಡೆವಾಲ್ಡ್ ಬ್ರೆವಿಸ್ ೫೭, ಡೆವಾನ್ ಕಾನ್ವೆ ೫೨ ರನ್ ಗಳಿಸಿದರು. ಈ ಗುರಿಯನ್ನು ಬೆನ್ನತ್ತಿದ  ಗುಜರಾತ್ ಟೈಟಾನ್ಸ್ ೧೮.೩ ಓವರ್‌ಗಳಲ್ಲಿ ೧೪೭ ರನ್‌ಗಳಿಗೆ ತನ್ನೆಲ್ಲ ವಿಕೆಟ್‌ಗಳನ್ನು ಕಳೆದುಕೊಂಡು ಸೋಲು ಅನುಭವಿಸಿತು. ಗುಜರಾತ್ ಪರ ಸಾಯಿ ಸುದರ್ಶನ್ ೪೧, ಅರ್ಶದ್‌ಖಾನ್ ೨೦ ರನ್ ಗಳಿಸಿದರು. ಚೆನ್ನೈ ಪರ ಅನ್ಶುಲ್ ಕಾಂಬೋಜ್ ಹಾಗೂ ನೂರ್ ಅಹಮ್ಮದ್ ತಲಾ ೩ ವಿಕೆಟ್ ಮತ್ತು ರವೀಂದ್ರ ಜಡೇಜಾ ೨ ವಿಕೆಟ್ ಪಡೆದರು. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ, ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ೧೧೦ ರನ್‌ಗಳ ಅಂತರದಿಂದ ಬೃಹತ್ ಗೆಲುವು ದಾಖಲಿಸಿದೆ.  ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಹೈದರಾಬಾದ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೭೮ ರನ್ ಗಳಿಸಿತು.

ಹೈದರಾಬಾದ್ ಪರ ಹನ್ರಿಚ್ ಕ್ಲಾಸೆನ್ ೧೦೫, ಟ್ರಾವಿಸ್ ಹೆಡ್ ೭೬, ಅಭಿಷೇಕ್ ಶರ್ಮಾ ೩೨ ರನ್ ಗಳಿಸಿದರು. ಗುರಿ ಬೆನ್ನತ್ತಿದ ಕೊಲ್ಕತ್ತಾ ನೈಟ್ ರೈಡರ್ಸ್ ೧೮.೪ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೬೮ ರನ್ ಗಳಿಸಷ್ಟೇ ಶಕ್ತವಾಯಿತು. ಹೈದರಾಬಾದ್ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ಹನ್ರಿಚ್ ಕ್ಲಾಸೆನ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ರಾಜಸ್ತಾನದ ಸವಾಯ್ ಮಾನ್ ಸಿಂಗ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>